**ಕರ್ನಾಟಕ ಸರ್ಕಾರದ ನಡವಳಿಗಳು**

**ವಿಷಯ:** ಖಜಾನೆಗಳಲ್ಲಿ ವರ್ಷಾಂತ್ಯದ ಬಿಲ್ಲುಗಳನ್ನು ಮಾರ್ಚ್ 31ರಂದೇ ತೀರ್ಣಗೊಳಿಸಿ ಲೆಕ್ಕವನ್ನು ಮುಕ್ತಾಯಗೊಳಿಸುವ ಬಗ್ಗೆ.

**ಓದಲಾಗಿದೆ:** 1) ಸರ್ಕಾರದ ಆದೇಶ ಸಂಖ್ಯೆ:ಆಇ 01 ಬಿಪಿಇ 2020 ದಿನಾಂಕ:8.1.2020.

* * * * *

**ಪ್ರಸ್ತಾವನೆ:-**

2019-20ನೇ ಸಾಲಿನ ವರ್ಷಾಂತ್ಯದ ಬಿಲ್ಲುಗಳನ್ನು ಖಜಾನೆಗಳಲ್ಲಿ ಸ್ವೀಕರಿಸಿ ತೀರ್ಣಗೊಳಿಸಿ ದಿನಾಂಕ:30-3-2020ರಂದೇ 2019-20ನೇ ಸಾಲಿನ ಲೆಕ್ಕಗಳನ್ನು ಮುಕ್ತಾಯಗೊಳಿಸಲು ಮೇಲೆ (1)ರಲ್ಲಿ ಓದಲಾದ ಆದೇಶದಲ್ಲಿ ಕಾಲಮಿತಿ ಸೂಚಿಸಿ ವೇಳಾಪಟ್ಟಿಯನ್ನು ನಿಗಧಿಪಡಿಸಲಾಗಿತ್ತು.

ವೇತನ / ವೇತನ ಬಾಕಿ ಬಿಲ್ಲುಗಳು/ಹಬ್ಬದ ಮುಂಗಡ ಬಿಲ್ಲು/ ಅನುದಾನಿತ ವೇತನ ಬಿಲ್ಲುಗಳು ಮತ್ತು ಕಛೇರಿ ವೆಚ್ಚಗಳಿಗೆ ಸಂಬಂಧಿಸಿದಂತೆ ಸಾದಿಲ್ವಾರು ಬಿಲ್ಲುಗಳು/ಪ್ರಯಾಣ ಭತ್ಯೆ ಬಿಲ್ಲುಗಳಿಗೆ ಸಂಬಂಧಿಸಿದಂತೆ ದಿನಾಂಕ: 31-01-2020ರೊಳಗೆ ಬಿಡುಗಡೆ ಆದೇಶಗಳನ್ನು ಹೊರಡಿಸಿ upload ಆಗಿರುವ ವೆಚ್ಚಗಳಿಗೆ ಸಂಬಂಧಿಸಿದಂತೆ ಬಿಲ್ಲು ಸಲ್ಲಿಸುವ ಕಡೆಯ ದಿನಾಂಕ ವಿಸ್ತರಿಸುವಂತೆ ಖಜಾನೆ ಆಯುಕ್ತರು ಕೋರಿರುತ್ತಾರೆ.

**ಸರ್ಕಾರಿ ಆದೇಶ ಸಂಖ್ಯೆ: ಆಇ 01 ಬಿಪಿಇ 2020, ಬೆಂಗಳೂರು, ದಿನಾಂಕ:19-02-2020**

ಈ ಕೆಳಕಂಡ ವೆಚ್ಚಗಳಿಗೆ ಸಂಬಂಧಿಸಿದಂತೆ ಈಗಾಗಲೇ ನಿಗಧಿಪಡಿಸಿರುವ ದಿನಾಂಕವನ್ನು ಈ ಕೆಳಗಿನಂತೆ ವಿಸ್ತರಿಸಿ ಆದೇಶಿಸಿದೆ.

<table>
<tr><td rowspan="2">ಬಿಲ್ಲುಗಳ ಸ್ವರೂಪ/ವಿವರಗಳು</td><td colspan="2">31-01-2020ರೊಳಗೆ ಬಿಡುಗಡೆ ಆದೇಶಗಳನ್ನು ಹೊರಡಿಸಿ upload ಆಗಿರುವ ವೆಚ್ಚಗಳಿಗೆ ಸಂಬಂಧಿಸಿದಂತೆ ಬಿಲ್ಲು ಸಲ್ಲಿಸುವ ಕಡೆಯ ದಿನಾಂಕ</td></tr>
<tr><td>ದಿ:08/01/2020ರ ಆದೇಶದ ಪ್ರಕಾರ ನಿಗಧಿಪಡಿಸಲಾದ ಕೊನೆಯ ದಿನಾಂಕ</td><td>ವಿಸ್ತರಿಸಿರುವ ದಿನಾಂಕ</td></tr>
<tr><td>1)ವೇತನ / ವೇತನ ಬಾಕಿ ಬಿಲ್ಲುಗಳು/ಹಬ್ಬದ ಮುಂಗಡ ಬಿಲ್ಲು/ ಅನುದಾನಿತ ವೇತನ ಬಿಲ್ಲುಗಳು.</td><td>14-02-2020</td><td>24.02.2020</td></tr>
<tr><td>2)ಕಛೇರಿ ವೆಚ್ಚಗಳಿಗೆ ಸಂಬಂಧಿಸಿದಂತೆ ಸಾದಿಲ್ವಾರು ಬಿಲ್ಲುಗಳು/ಪ್ರಯಾಣ ಭತ್ಯೆ ಬಿಲ್ಲುಗಳು.</td><td>16-02-2020</td><td>24.02.2020</td></tr>
</table>

ಮೇಲ್ಕಂಡ ಬಿಲ್ಲುಗಳನ್ನು ಹೊರತುಪಡಿಸಿ, ಉಳಿದ ಬಿಲ್ಲುಗಳನ್ನು ಸಲ್ಲಿಸಲು ಸರ್ಕಾರದ ಆದೇಶ ಸಂಖ್ಯೆ:ಆಇ 01 ಬಿಪಿಇ 2020 ದಿನಾಂಕ:08.01.2020ರಲ್ಲಿ ನಿಗಧಿಗೊಳಿಸಲಾಗಿದ್ದ ಕಾಲಮಿತಿಯು ಮುಂದುವರೆಯುತ್ತದೆ

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ

ಮತ್ತು ಅವರ ಹೆಸರಿನಲ್ಲಿ,

19/2/2020

(ಹೆಚ್.ಎ.ಶೋಭ)

ಸರ್ಕಾರದ ಉಪ ಕಾರ್ಯದರ್ಶಿ

(ಎಫ್‌ಆರ್ ಮತ್ತು ಬಿಸಿಸಿ)

ಆರ್ಥಿಕ ಇಲಾಖೆ

ಇವರಿಗೆ:-

1) ಮಹಾಲೇಖಪಾಲರು (A&E)/(G&SSA)/(E&RSA), ಕರ್ನಾಟಕ, ಬೆಂಗಳೂರು.
2) ರಿಜಿಸ್ಟ್ರಾರ್ ಜನರಲ್, ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು.
3) ಮುಖ್ಯ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿ, ಕರ್ನಾಟಕ, ಬೆಂಗಳೂರು.
4) ಅಪರ ಮುಖ್ಯ ಕಾರ್ಯದರ್ಶಿ, ಕರ್ನಾಟಕ, ಬೆಂಗಳೂರು.
5) ಸರ್ಕಾರದ ಎಲ್ಲಾ ಅಪರ/ಪ್ರಧಾನ ಕಾರ್ಯದರ್ಶಿಗಳು / ಕಾರ್ಯದರ್ಶಿಗಳು.
6) ಅಭಿವೃದ್ಧಿ ಆಯುಕ್ತರು, ವಿಧಾನಸೌಧ, ಬೆಂಗಳೂರು.
7) ಲೋಕಾಯುಕ್ತರು, ಕರ್ನಾಟಕ, ಬೆಂಗಳೂರು.
8) ಎಲ್ಲಾ ಪ್ರಾದೇಶಿಕ ಆಯುಕ್ತರುಗಳು.
9) ರಿಜಿಸ್ಟ್ರಾರ್, ಕರ್ನಾಟಕ ಆಡಳಿತ ಮಂಡಳಿ, ಕಂದಾಯ ಭವನ, ಕೆ.ಜಿ.ರಸ್ತೆ, ಬೆಂಗಳೂರು-9.
10) ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು /ಎಲ್ಲಾ ಜಿಲ್ಲಾ ಪಂಚಾಯತ್‌ಗಳ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು.
11) ಆಯುಕ್ತರು, ಖಜಾನೆ ಇಲಾಖೆ, ಬೆಂಗಳೂರು.
12) ಎಲ್ಲಾ ಆಂತರಿಕ ಆರ್ಥಿಕ ಸಲಹೆಗಾರರು.
13) ಎಲ್ಲಾ ಇಲಾಖಾ ಮುಖ್ಯಸ್ಥರು.
14) ಕಛೇರಿ ಪ್ರತಿ/ಹೆಚ್ಚುವರಿ ಪ್ರತಿಗಳು.